## 2 ನೇ ಹೆಚ್ಚುವರಿ ಪ್ರಥಮ ದರ್ಜೆಯ  ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು

**ಸಿ.ಸಿ 1751-2021**                **ಸಿ. ಡಬ್ಲುಃ 03**

**ಪಿ. ಡಬ್ಲುಃ 02**

| | |
|---|---|
| ಸಾಕ್ಷಿದಾರರ ಹೆಸರು<br>ತಂದೆಯ  ಹೆಸರು<br>ವಯಸ್ಸು<br>ಕೆಲಸ<br>ವಾಸ | ಉಮ್ಮತ್ತೂರಯ್ಯ<br>ಗೋಪಾಲಯ್ಯ<br>53 ವರ್ಷ<br>ಟಿ.ಸಿ. ಚಾಮರಾಜನಗರ ಡಿಪೋ<br>ಚಾಮರಾಜನಗರ |
| | **ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ** 23-08-2022 |

**ಮುಖ್ಯ ವಿಚಾರಣೆಃ  ಶ್ರೀ. ಎಪಿಪಿ  ವಕೀಲರಿಂದಃ**

ನಾನು 2019 ರಿಂದ ಇಲ್ಲಿಯವರೆವಿಗೂ ನಂಜಗೂಡಿನ ಕೆ.ಎಸ್.ಆರ್.ಟಿ.ಸಿ ಡಿಪೋದಲ್ಲಿ ಟಿ.ಸಿ ಆಗಿ ಕೆಲಸ ಮಾಡಿರುತ್ತೇನೆ. ಚಾಸಾ-2 ನನಗೆ ಗೊತ್ತು. ಈ ಪ್ರಕರಣದ ಆರೋಪಿ ನನಗೆ ಗೊತ್ತು. ಸಾಕ್ಷಿಗೆ ಒಂದು ದಾಖಲೆ ತೋರಿಸಿದ್ದು ಅದು ಅಮಾನತ್ತು ಮಹಜರ್ ಆಗಿದ್ದು ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ಈಗಾಗೇ ನಿಪಿ-1 ಎಂದು ಗುರುತಿಸಲಾಗಿದ್ದು, ಅದರ ಮೇಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ನಿಪಿ-1 ಕ್ಕೆ ಸಂಚಾರಿ ಠಾಣೆಯ ಮುಂಭಾಗ ಅಪಘಾತಪಡಿಸಿದ ವಾಹವನ್ನು ಆರೋಪಿಯು ಹಾಜರುಡಿಸಿದ್ದು ಆ ಸಮಯ 5.45 ರಿಂದ 6.15 ರವರೆಗೆ ಅಮಾನತ್ತು ಪಂಚನಾಮೆ ಕ್ರಮ ಜರುಗಿಸಿದ್ದು ಆ ಸಮಯ ನಾನು ನಿಪಿ-1 ಕ್ಕೆ ನನ್ನ ಸಹಿ ಮಾಡಿರುತ್ತೇನೆ. ಅಪಘಾತಪಡಿಸಿದ ವಾಹನವನ್ನು ನನ್ನ ಸಮಕ್ಷಮ ಅಮಾನತ್ತು ಪಡಿಸಿಕೊಂಡಿದ್ದು ಸದರಿ ಬಸ್ಸಿನ ಭಾವ ಚಿತ್ರವನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿರುತ್ತದೆ. ಅಪಘಾತಕ್ಕೀಡಾದ ವಾಹನ ಕೆಎ-40-ಎಫ್-1140 ಅನ್ನು ಬಿಡುಗಡೆ ಮಾಡಿಸಿಕೊಳ್ಳಲು ನನ್ನ ಮೇಲಾಧಿಕಾರಿಗಳು ನನಗೆ ಅಧಿಕಾರ ಪತ್ರವನ್ನು ನೀಡಿದ್ದು ಅದರಂತೆ ನಾನು ಅಪಘಾತವಾದ ವಾಹನವನ್ನು ನನ್ನ ಸುಪರ್ದಿಗೆ ಪಡೆದುಕೊಂಡಿರುತ್ತೇನೆ. ಸಾಕ್ಷಿಯು ಅಧಿಕಾರ ಪತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-3

ಎಂದು ಗುರುತಿಸಲಾಯಿತು. ಅದರ ಮೇಲಿರುವ ತನ್ನ ಸಹಿಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅವುಗಳನ್ನು ಒಟ್ಟಾರೆಯಾಗಿ ಅದನ್ನು ನಿಪಿ–3(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪ ಪರ ಶ್ರೀ.ಎನ್.ಯು ವಕೀಲರಿಂದಃ**

ಪಾಟೀ ಸವಾಲು ಏನು ಇರುವುದಿಲ್ಲ.

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**ಸಹಿ/–**

**2 ನೇ ಕಿ.ಪ್ರ.ದ. ನ್ಯಾ ದಂ. ನಂಜನಗೂಡು**